ಪ್ರಜಾವಾಣಿ

# ಯುವನೀತಿ ಜಾರಿಗೆ ರೂ 25 ಕೋಟಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಯುವಜನರ ಸಬಲೀಕರಣಕ್ಕಾಗಿ ರೂಪಿಸಲಾಗಿರುವ ರಾಜ್ಯ ಯುವ ನೀತಿಯನ್ನು ಸ್ವಾಮಿ ವಿವೇಕಾನಂದರ 150ನೇ ಜನ್ಮದಿನದ ಅಂಗವಾಗಿ ಜನವರಿ 12ರಂದು ಪ್ರತಿ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಘೋಷಿಸಿದರು.

ಮುಖ್ಯಮಂತ್ರಿಗಳ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಗುರುವಾರ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಿದ್ಧಪಡಿಸಿದ 'ಕರ್ನಾಟಕ ರಾಜ್ಯ ಯುವ ನೀತಿ 2012' ಸ್ವೀಕರಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಸುಮಾರು 1.90 ಕೋಟಿ ಯುವಜನರಿದ್ದಾರೆ. ಅವರ ಸರ್ವತೋಮುಖ ಅಭಿವೃದ್ಧಿಗೆ ಬಜೆಟ್‌ನಲ್ಲಿ ಅನುದಾನವನ್ನು ತೆಗೆದಿರಿಸಲಾಗಿದೆ. ಅದರಲ್ಲಿ ಯುವನೀತಿ ಅನುಷ್ಠಾನಕ್ಕೆ ರೂ 25 ಕೋಟಿ ರೂಪಾಯಿ ನೀಡಲಾಗಿದೆ ಎಂದು ಅವರು ವಿವರಿಸಿದರು.

ವ್ಯಾಪಕ ಚರ್ಚೆ ಮತ್ತು ಪರಾಮರ್ಶೆ ಬಳಿಕ ಯುವ ನೀತಿಯನ್ನು ರೂಪಿಸಲಾಗಿದೆ ಎಂದು ರಾಜ್ಯ ಯುವ ನೀತಿ ಚಾಲನಾ ಸಮಿತಿ ಅಧ್ಯಕ್ಷ ಗಿರೀಶ್ ಪಟೇಲ್ ಹೇಳಿದರು.

**ಯುವ ನೀತಿಯ ಶಿಫಾರಸುಗಳು:** ವಿದ್ಯಾರ್ಥಿ ಕೇಂದ್ರಿತ ಶಿಕ್ಷಣ ಕಾರ್ಯಪಡೆ ರಚಿಸಬೇಕು. ಸ್ವಾಮಿ ವಿವೇಕಾನಂದ ಯುವ ಸಬಲೀಕರಣ ನಿಗಮ ಸ್ಥಾಪಿಸಬೇಕು ಎಂಬ ಅಂಶಗಳೂ ಸೇರಿದಂತೆ 10 ಶಿಫಾರಸುಗಳನ್ನು ಯುವನೀತಿ ಒಳಗೊಂಡಿದೆ.

ಯುವಜನರಲ್ಲಿ ಉದ್ಯಮಶೀಲತೆ ಪ್ರೋತ್ಸಾಹಿಸುವುದು, ಕೃಷಿ ಆಧಾರಿತ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವಂತೆ ಪ್ರೇರೇಪಿಸಲು ಕಾರ್ಯಕ್ರಮ ರೂಪಿಸುವುದು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ಯೋಜನೆಗಳನ್ನು ಕಾಲಕಾಲಕ್ಕೆ ಪರಿಶೀಲಿಸಿ ಪುನರ್‌ರಚಿಸಲು ಸಲಹೆ ನೀಡುವುದು, ಯುವನೀತಿ ಬಗ್ಗೆ ಸರ್ಕಾರಕ್ಕೆ ಕಾಲಕಾಲಕ್ಕೆ ಶಿಫಾರಸು ಮಾಡುವುದು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯನ್ನು ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಎಂದು ಪುನರ್ ನಾಮಕರಣ ಮಾಡುವುದು, ಗ್ರಾಮ ಪಂಚಾಯ್ತಿ ಹಾಗೂ ನಗರಗಳ ವಾರ್ಡ್ ಮಟ್ಟದಲ್ಲಿ ವಿವೇಕಾನಂದ ಯುವ ಕೇಂದ್ರಗಳನ್ನು ಸ್ಥಾಪಿಸುವುದು ಇದರಲ್ಲಿ ಸೇರಿದೆ.



ಮುಖ್ಯಮಂತ್ರಿಗಳ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಗುರುವಾರ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಲ್ಲಿಸಿದ 'ಕರ್ನಾಟಕ ರಾಜ್ಯ ಯುವ ನೀತಿ 2012'ನ್ನು ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಬಿಡುಗಡೆ ಮಾಡಿದರು. ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ನಿರ್ದೇಶಕ ಬಲದೇವಕೃಷ್ಣ, ಯುವನೀತಿ ಕರಡು ರಚನಾ ಸಮಿತಿ ಅಧ್ಯಕ್ಷ ಸಂದೀಪ್ ಶಾಸ್ತ್ರಿ, ರಾಜ್ಯ ಯುವ ನೀತಿ ಚಾಲನಾ ಸಮಿತಿ ಅಧ್ಯಕ್ಷ ಗಿರೀಶ್ ಪಟೇಲ್, ಯುವಜನ ಸೇವಾ ಮತ್ತು ಕ್ರೀಡಾ ಸಚಿವ ಎಂ.ಪಿ.ಅಪ್ಪಚ್ಚು ರಂಜನ್ ಚಿತ್ರದಲ್ಲಿದ್ದಾರೆ.